ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ಕಬ್ಬನ್ ಪಾರ್ಕ್ ಮತ್ತು ಲಾಲ್‌ಬಾಗ್‌ಗಳಲ್ಲಿ ವಾಹನ ಸಂಚಾರದ ಬಗ್ಗೆ

ಶ್ರೀ ಎನ್.ರವಿಕುಮಾರ್(ವಿಧಾನಸಭೆಯಿಂದ ಚುನಾಯಿತರಾದವರು) -

736 (778) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕಬ್ಬನ್ ಪಾರ್ಕ್ ಮತ್ತು ಲಾಲ್‌ಬಾಗ್ ಉದ್ಯಾನಗಳಲ್ಲಿ ವಾಹನ ಸಂಚಾರ ಮತ್ತು ನಿಲುಗಡೆ ಸೌಲಭ್ಯವನ್ನು ನೀಡಿರುವುದರಿಂದ ಅಲ್ಲಿರುವ ಪ್ರಾಣಿ ಮತ್ತು ಪಕ್ಷಿಗಳಿಗೆ ತೊಂದರೆಯುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ವಾಹನ ನಿಲುಗಡೆ ಸೌಲಭ್ಯವನ್ನು ರದ್ದುಗೊಳಸುವ ಬಗ್ಗೆ ಸರ್ಕಾರದ ನಿಲುವೇನು;

(ಆ) ಕಬ್ಬನ್ ಪಾರ್ಕ್ ಮತ್ತು ಲಾಲ್‌ಬಾಗ್‌ಗಳಲ್ಲಿ ಅನಧಿಕೃತವಾಗಿ ವಾಣಿಜ್ಯ ಉದ್ದೇಶಗಳಿಗಾಗಿ ಕಟ್ಟಡ ನಿರ್ಮಾಣ ಮಾಡಿದ್ದು ಅವುಗಳನ್ನು ತೆರವುಗೊಳಿಸುವ ಕುರಿತು ಸರ್ಕಾರದ ನಿಲುವೇನು;

(ಇ) ಕಬ್ಬನ್ ಪಾರ್ಕ್ ಮತ್ತು ಲಾಲ್‌ಬಾಗ್‌ಗಳು ಬೆಂಗಳೂರು ನಗರಕ್ಕೆ ಆಮ್ಲಜನಕ ನೀಡುವ ಮುಖ್ಯ ಭಾಗವಾಗಿದ್ದು ಈ ಪ್ರದೇಶಗಳಲ್ಲಿ ವಾಹನ ಸಂಚಾರ ಮತ್ತು ವಾಣಿಜ್ಯ ವ್ಯವಹಾರಗಳನ್ನು ರದ್ದು ಮಾಡುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ; ಈ ಕುರಿತು ಸರ್ಕಾರದ ನಿಲುವೇನು?